# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1040 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎನ್ ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 25.07.2024 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ನವ ಮಂಗಳೂರು ಬಂದರಿನ ನಿರ್ವಸಿತರಿಗೆ ಆಶ್ರಯ ಕಲ್ಪಿಸುವ ನಿಟ್ಟಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮದಲ್ಲಿರುವ ಯಾವ ಯಾವ ಕೈಗಾರಿಕೆಗಳಿಗೆ ಅಗ್ನಿಶಾಮಕ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ನೀಡಲಾಗಿದೆ; ಮರದ ಮಿಲ್ಲುಗಳನ್ನು ಪ್ರಾರಂಭಿಸಲು ಅಥವಾ ಸದರಿ ಮರದ ಮಿಲ್ಲಿನ ಅನುಮತಿಯನ್ನು ಮುಂದುವರೆಸಲು ಅಗ್ನಿಶಾಮಕ ಇಲಾಖೆಯ ನಿರಾಕ್ಷೇಪಣಾ ಪತ್ರದ ಅಗತ್ಯವಿಲ್ಲವೇ; ಈ ಕುರಿತು ಸರ್ಕಾರದ ನಿಲುವೇನು; | ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳಿ ಗ್ರಾಮದಲ್ಲಿ ಯಾವುದೇ ಕೈಗಾರಿಕೆಗಳು ಇರುವುದಿಲ್ಲ. ಮರದ ಮಿಲ್ಲುಗಳನ್ನು ಪ್ರಾರಂಭಿಸಲು ಅನುಭೋಗದಾರರು / ಪ್ರದೇಶದ ಮಾಲೀಕರು ನಿರಾಕ್ಷೇಪಣಾ ಪತ್ರ ಕೋರಿ ಅರ್ಜಿ ಸಲ್ಲಿಸಿದಲ್ಲಿ ಈ ಕೆಳಕಂಡ ಅಧಿನಿಯಮ ಮತ್ತು ಮಾನದಂಡಗಳನ್ವಯ ನಿಯಮಾನುಸಾರ ಪರಿಶೀಲಿಸಿ ನಿರಾಕ್ಷೇಪಣಾ ಪತ್ರ ನೀಡಲಾಗುವುದು.<br><br>ಮೈಸೂರು ಅಗ್ನಿಶಾಮಕ ಅಧಿನಿಯಮ 1964 ರ ಕಲಂ 13(1) & (2) ಈ ಕೆಳಕಂಡಂತಿದೆ.<br><br>13. Preventive measures.—(1) The State Government may by notification in the official Gazette, require owners or occupiers of premises in any area or any class premises used for purposes which in its opinion are likely to cause a risk of fire, to take such precautions as may be specified in such notification.<br><br>(2) Where a notification has been issued under sub-section (1), it shall be lawful for the Director or any officer of the Force authorised by the State Government in this behalf to direct the removal of objects or goods likely to cause a risk of fire, to a place of safety; and on failure of the owner or occupier to do so, the Director or such officer may, after giving the owner or occupier a reasonable opportunity of making representation, seize, detain or remove such objects or goods.<br><br>ಮುಂದುವರೆದು, ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 91 ಎಸ್‌ಎಫ್‌ಬಿ 1967, ದಿನಾಂಕ: 20-09-1971 ರನ್ವಯ ಮಾನದಂಡಗಳನ್ನು ನಿಗದಿಪಡಿಸಲಾಗಿದೆ. |

| | | |
|---|---|---|
| ಆ | ಕೃಷ್ಣಾಪುರದ 5ನೇ ಬ್ಲಾಕಿನಲ್ಲಿರುವ ಆಶಾ ಮರದ ಮಿಲ್ಲು ವಸತಿ ಪ್ರದೇಶದಲ್ಲಿದ್ದು, ರಸ್ತೆಯ ಇಕ್ಕೆಲಗಳಲ್ಲಿ ಒಣ ಮರದ ದಿಮ್ಮಿಗಳನ್ನು ದೊಡ್ಡ ಪ್ರಮಾಣದಲ್ಲಿ ಸಂಗ್ರಹಿಸುತ್ತಿದ್ದು ಅಗ್ನಿ ಅವಘಡ ಉಂಟಾದಲ್ಲಿ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ; ಅಗ್ನಿಶಾಮಕ ಇಲಾಖೆಯು ರಸ್ತೆಯ ಇಕ್ಕೆಲಗಳಲ್ಲಿ ಮರದ ದಿಮ್ಮಿಗಳನ್ನು ಸಂಗ್ರಹಿಸಲು ಅನುಮತಿ ನೀಡಿದೆಯೇ; ಇಲ್ಲವಾದಲ್ಲಿ, ಈ ಅಕ್ರಮ ಸಂಗ್ರಹದ ಕುರಿತು ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಕೃಷ್ಣಾಪುರದ 5ನೇ ಬ್ಲಾಕಿನಲ್ಲಿರುವ ಆಶಾ ಮರದ ಮಿಲ್ಲು ವಸತಿ ಪ್ರದೇಶದಲ್ಲಿದ್ದು, ರಸ್ತೆಯ ಇಕ್ಕೆಲಗಳಲ್ಲಿ ಒಣ ಮರದ ದಿಮ್ಮಿಗಳನ್ನು ದೊಡ್ಡ ಪ್ರಮಾಣದಲ್ಲಿ ಸಂಗ್ರಹಿಸಿದ್ದಲ್ಲಿ, ಇದರಿಂದ ಅಗ್ನಿ ಅವಘಡ ಉಂಟಾದಲ್ಲಿ ಮರದ ಮಿಲ್ಲಿನ ಮಾಲೀಕರನ್ನು ಮೇಲಿನ ಅಧಿನಿಯಮ ಮತ್ತು ಮಾನದಂಡಗಳನ್ವಯ ಹೊಣೆಗಾರರನ್ನಾಗಿ ಮಾಡಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. ಆದರೆ ರಸ್ತೆಯ ಇಕ್ಕೆಲಗಳಲ್ಲಿ ಮರದ ದಿಮ್ಮಿಗಳನ್ನು ಸಂಗ್ರಹಿಸಲು ಅಗ್ನಿಶಾಮಕ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ನೀಡಲಾಗುವುದಿಲ್ಲ.<br><br>ಈ ಅಕ್ರಮ ಸಂಗ್ರಹಕ್ಕೆ ಸಂಬಂಧಿಸಿದಂತೆ ಯಾವುದೇ ದೂರು ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ. ಮುಂದಿನ ದಿನಗಳಲ್ಲಿ ಸ್ವೀಕೃತವಾದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಹೆಚ್‌ಡಿ 144 ಎಸ್‌ಎಫ್‌ಬಿ 2024**

**(ಡಾ. ಜಿ. ಪರಮೇಶ್ವರ)**
**ಗೃಹ ಸಚಿವರು**